## 1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ. ರವರ ನ್ಯಾಯಾಲಯ, ಪಿರಿಯಾಪಟ್ಟಣ.

### ಸಿ.ಸಿ. ಸಂಃ 613/2019

| | | |
|---|---|---|
| ಸಾಕ್ಷಿಯ ಹೆಸರುಃ | ಗಿರಿಗೌಡ | ಫ್ರಾಸಾಃಃ 14 |
| ತಂದೆ ಹೆಸರುಃ | ರಾಜೇಗೌಡ | ಚಾಸಾಃಃ 15 |
| ವಯಸ್ಸುಃ | 52 ವರ್ಷ | ಪ್ರಮಾಣೀಕರಿಸಿದ<br>ದಿಃ 25/11/2025 |
| ಉದ್ಯೋಗಃ | ವ್ಯವಸಾಯ | |
| ವಾಸ ಸ್ಥಳಃ | ಬೆಟ್ಟದಪುರ ಗ್ರಾಮ,<br>ಪಿರಿಯಾಪಟ್ಟಣ ತಾ. | |

**ಮುಖ್ಯ ವಿಚಾರಣೆಃ ಮಾನ್ಯ ಸಸಅ ರಿಂದಃ**

ನನಗೆ ಚಾಸಾ-16 ಗೊತ್ತು. ಸಾಕ್ಷಿಯು ದಿಃ 22.07.2016 ರ ಸ್ಥಳ ಪಂಚನಾಮೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ಪಂಚನಾಮೆಯನ್ನು **ನಿಪಿ-16** ಎಂದು, ಸಾಕ್ಷಿಯ ಸಹಿಯನ್ನು **ನಿಪಿ-16(ಎ)** ಎಂದು ಗುರುತಿಸಲಾಯಿತು. 8-9 ವರುಷಗಳ ಹಿಂದೆ ಸದರಿ ಸಹಿಯನ್ನು ಬೆಟ್ಟದಪುರ ಪೊಲೀಸ್ ಠಾಣೆಯಲ್ಲಿ ಹಾಕಿರುತ್ತೇನೆ. ಯಾವ ಕಾರಣಕ್ಕೆ ಸಹಿ ಮಾಡಿರುತ್ತೇನೆ ಎಂದು ಗೊತ್ತಿಲ್ಲ. ನನ್ನ ಸಮಕ್ಷಮ ಮಹಜರು ಕ್ರಮ ಜರುಗಿಸಿಲ್ಲ. ನನ್ನ ಮಕ್ಷಮ ಯಾವುದೇ ವಾಹನವನ್ನು ಬಿಡುಗಡೆ ಗೊಳಿಸಿಲ್ಲ. ನಿಪಿ-16 ರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ.

**(ಈ ಸಮಯದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರುತ್ತಾರೆ. ಕಡತವನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)**

**<u>ಪಾಟೀ ಸವಾಲುಃ ಮಾನ್ಯ ಸಸಅ ರವರಿಂದಃ</u>**

ದಿಃ 22.07.2016 ರಂದು ಪೋಲೀಸರು ನನ್ನನ್ನು ಠಾಣೆಗೆ ಕರೆಸಿ ಈ ಪ್ರಕರಣದಲ್ಲಿ ಅಮಾನತ್ತು ಪಡಿಸಿಕೊಂಡಿರುವ ಬುಲೇರೋ ವಾಹನವನ್ನು ಪೋಟೋ ತೆಗೆದು ಅದರ ಮಾಲೀಕರಿಗೆ ಪಂಚನಾಮೆ ಮಾಡಿ ಬಿಡುಗಡೆ ಮಾಡಿದರು ಎಂದರೆ ಸರಿಯಲ್ಲ. ಈ ಎಲ್ಲಾ ವಿಚಾರಗಳು ಗೊತ್ತಿದ್ದರೂ ಸಹ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು: ಆರೋಪಿತರ ಪರ ವಕೀಲರಿಂದಃ</u>** ಇಲ್ಲ.

**ಮರು ವಿಚಾರಣೆಃ** ಇಲ್ಲ.

**<u>ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು</u>**

**<u>ಓದಿ ಹೇಳಿ ಕೇಳಿ ಸರಿ ಇದೆ ಎಂದು ಸಾಕ್ಷಿ ಒಪ್ಪಿಕೊಂಡಿರುತ್ತಾರೆ.</u>**

**1 ನೇ ಹೆಚ್.ಸಿ.ನ್ಯಾ ಹಾಗೂ ಪ್ರ.ದ.ನ್ಯಾದಂ.,**

**ಪಿರಿಯಾಪಟ್ಟಣ.**